# ಚಿತ್ರದುರ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿ

ಅಧಿಸೂಚನೆ ಸಂಖ್ಯೆ: 01/2022 ದಿನಾಂಕ: 12.07.2022

**ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ದಿ: 15.07.2022 ರಿಂದ ಸಲ್ಲಿಸಬಹುದಾಗಿದೆ**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿ: 18.08.2022, ಸಮಯ ರಾತ್ರಿ 11.59 ಗಂಟೆಯವರೆಗೆ**

**ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿ: 20.08.2022**

ವಿಷಯ:- ಚಿತ್ರದುರ್ಗ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಶೀಘ್ರಲಿಪಿಗಾರರು ಗ್ರೇಡ್-III, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು, ಆದೇಶ-ಜಾರಿಕಾರರು ಹಾಗೂ ಜವಾನರ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ:-

ಉಲ್ಲೇಖ:-

1. ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಎಲ್‌ಸಿಎ/II-128/2012, ದಿನಾಂಕ 21.12.2019.
2. ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಡಿಜೆಎ- II (ಎಲ್‌ಸಿಎ-II) 128/2012, ದಿನಾಂಕ 27.01.2022.
3. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982.
4. ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮ, 2021, ದಿ: 06.03.2021.
5. ಈ ಕಚೇರಿ ಟಿಪ್ಪಣಿ ಹಾಗೂ ದಿನಾಂಕ: 28.03.2022 ಮತ್ತು 07.07.2022ರ ಟಿಪ್ಪಣಿ ಮೇಲಿನ ಆದೇಶ.

ಚಿತ್ರದುರ್ಗ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಶೀಘ್ರಲಿಪಿಗಾರರು ಗ್ರೇಡ್- III, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರ, ಆದೇಶ-ಜಾರಿಕಾರರ ಹಾಗೂ ಜವಾನರ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮುಖಾಂತರ** ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆದ್ದರಿಂದ, ಈ ಅಧಿಸೂಚನೆಯನ್ವಯ ಅಧಿಸೂಚಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು **https://districts.ecourts.gov.in/chitradurga-onlinerecruitment** ರಲ್ಲಿ ನೀಡಲಾದ ಲಿಂಕ್ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ.

ಎ) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ: 08 ಸೇನೆನಿ 1995, ದಿನಾಂಕ:20.06.1995

ಬಿ) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ: 53 ಸೇನೆನಿ 2007, ದಿನಾಂಕ:04.01.2008

ಸಿ) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ: 128 ಸೇನೆನಿ 2008, ದಿನಾಂಕ:01.08.2009

ಡಿ) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ: 149 ಸೇನೇನಿ 2020, ದಿ: 25.09.2020.

ಇ) ಸರ್ಕಾರದ ಅಧಿಸೂಚನೆ ಸಂ. ಸಿಆಸುಇ 179 ಸೇನೇನಿ 2020, ದಿ: 06.07.2020 ಮತ್ತು ಸರ್ಕಾರದ ಆದೇಶ ಸಂ. ಸಿಆಸುಇ 179 ಸೇನೇನಿ 2020, ದಿ: 14.07.2021.

ರ ಮೇಲ್ಕಂಡ ಸರ್ಕಾರಿ ಆದೇಶಗಳ ಅನುಸಾರ ಭರ್ತಿ ಮಾಡಬೇಕಾದ ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡಂತಿದೆ.

<u>ಶೀಘ್ರಲಿಪಿಗಾರರು ಗ್ರೇಡ್- III</u> ಃ ಹುದ್ದೆಗಳ ಸಂಖ್ಯೆ-01

| | ವರ್ಗೀಕರಣ | ಮಹಿಳಾ |
|---|---|---|
| 1 | ಸಾ.ಅ. | 1 |
| ಒಟ್ಟು | | 1 |

<u>ಬೆರಳಚ್ಚುಗಾರರು</u> ಃ ಹುದ್ದೆಗಳ ಸಂಖ್ಯೆ-01

| | ವರ್ಗೀಕರಣ | ಯೋಜನಾ ನಿರಾಶ್ರಿತರು |
|---|---|---|
| 1 | ಸಾ.ಅ. | 1 |
| ಒಟ್ಟು | | 1 |

<u>ಬೆರಳಚ್ಚು-ನಕಲುಗಾರರು</u> ಃ ಹುದ್ದೆಗಳ ಸಂಖ್ಯೆ-02

| | ವರ್ಗೀಕರಣ | ಮಹಿಳಾ |
|---|---|---|
| 1 | ಸಾ.ಅ. | 1 |
| 2 | ಪ್ರವರ್ಗ-1 | 1 |
| ಒಟ್ಟು | | 2 |

<u>ಆದೇಶ-ಜಾರಿಕಾರರು</u> ಃ ಹುದ್ದೆಗಳ ಸಂಖ್ಯೆ-02

| | ವರ್ಗೀಕರವ | ಮಾಜಿ ಸೈನಿಕ |
|---|---|---|
| 1 | ಪ.ಜಾ. | 1 |
| 2 | ಸಾ.ಅ. | 1 |
| ಒಟ್ಟು | | 2 |

ಜವಾನರು : ಹುದ್ದೆಗಳ ಸಂಖ್ಯೆ-27

| | ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಯೋಜನಾ ನಿರಾಶ್ರಿತರು | ಅಂಗವಿಕಲ | ತೃತೀಯ ಲಿಂಗ (Trans gender) | ಒಟ್ಟು |
|---|---|---|---|---|---|---|---|---|---|
| 1 | ಸಾ.ಅ. | 2 | 4 | 3 | 1 | 1 | 1 * | 1 ** | 13 |
| 2 | ಪ.ಜಾ. | 2 | 1 | | 1 | | | | 4 |
| 3 | 2ಎ | 2 | 1 | | 1 | 1 | | | 5 |
| 4 | 2ಬಿ | | 1 | 1 | | | | | 2 |
| 5 | 3ಎ | | 1 | | | | | | 1 |
| 6 | 3ಬಿ | | | 1 | | | | | 1 |
| 7 | ಪ್ರ-1 | | | 1 | | | | | 1 |
| | | | | | | | | ಒಟ್ಟು | 27 |

* Reserved for Bench Mark disability ie., Locomotor disability including cerebral palsy, leprosy cured, dwarfism, acid attack victims & muscular dystrophy as per G.O. DPAR 149 SRR 2020, dt: 25.9.2020.

** Reserved for Trans-Gender candidate as per Govt. Notification DPAR 179 SRR 2020, dt: 6.7.2021 & G.O. DPAR 179 SRR 2020, dtd: 14.7.2021

## ಶೈಕ್ಷಣಿಕ ವಿದ್ಯಾರ್ಹತೆ:

### 1. ಶೀಘ್ರಲಿಪಿಗಾರರು ಗ್ರೇಡ್-III ಹುದ್ದೆ:

1) ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

2) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಹಾಗೂ ಕನ್ನಡ ಹಾಗೂ ಆಂಗ್ಲ ಶೀಘ್ರಲಿಪಿ ಪ್ರೌಢದರ್ಜೆ ಪರೀಕ್ಷೆಗಳಲ್ಲಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪ್ರೌಢದರ್ಜೆ ಹಾಗೂ ಶೀಘ್ರಲಿಪಿ ಪ್ರೌಢದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

## 2. ಬೆರಳಚ್ಚುಗಾರರ ಹುದ್ದೆ ಃ

1. ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಪ್ರೌಢದರ್ಜೆ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಉತ್ತೀರ್ಣರಾಗಿರಬೇಕು.

## 3. ಬೆರಳಚ್ಚು-ನಕಲುಗಾರರ ಹುದ್ದೆ ಃ

1. ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಕಿರಿಯ ದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಕಿರಿಯ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಉತ್ತೀರ್ಣರಾಗಿರಬೇಕು.

## 4. ಆದೇಶ-ಜಾರಿಕಾರರ ಹುದ್ದೆಃ

1. 10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ.
2. ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.
3. ಲಘು ವಾಹನ ಚಾಲನಾ ಪರವಾನಗಿ ಹೊಂದಿದವರಿಗೆ ಆದ್ಯತೆ ನೀಡಲಾಗುವುದು.
4. **10ನೇ ತರಗತಿ ಅಂಕಪಟ್ಟಿಯಲ್ಲಿ ನಿಗದಿ ಪಡಿಸಿದ ಗರಿಷ್ಠ ಅಂಕ ಹಾಗೂ ಅಭ್ಯರ್ಥಿ ಗಳಿಸಿರುವ ಅಂಕಗಳು ಹಾಗೂ ಶೇಕಡವಾರು ಅಂಕಗಳು ಸ್ಪಷ್ಟವಾಗಿ ನಮೂದಿಸಿರತಕ್ಕದ್ದು.**

## 5. ಜವಾನರ ಹುದ್ದೆಃ

1. **10ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು** ಅಥವಾ ತತ್ಸಮಾನ ವಿದ್ಯಾರ್ಹತೆ.
2. **ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರಬೇಕು.**
3. **10ನೇ ತರಗತಿ ಅಂಕಪಟ್ಟಿಯಲ್ಲಿ ನಿಗದಿ ಪಡಿಸಿದ ಗರಿಷ್ಠ ಅಂಕ ಹಾಗೂ ಅಭ್ಯರ್ಥಿ ಗಳಿಸಿರುವ ಅಂಕಗಳು ಹಾಗೂ ಶೇಕಡವಾರು ಅಂಕಗಳು ಸ್ಪಷ್ಟವಾಗಿ ನಮೂದಿಸಿರತಕ್ಕದ್ದು.**

**ವಯೋಮಿತಿ (ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅನುಗುಣವಾಗಿ):-**

**ಕನಿಷ್ಠ 18 ವರ್ಷಗಳು**

**ಗರಿಷ್ಠ :**

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ, 3ಎ, 3ಬಿ | 38 ವರ್ಷ |
| ಪ.ಜಾ/ ಪ್ರವರ್ಗ-1 | 40 ವರ್ಷ |

1. ಸರ್ಕಾರಿ ಸೇವೆಯಲ್ಲಿರುವವರಿಗೆ/ವಿಧವೆಯರಿಗೆ/ಅಂಗವಿಕಲರಿಗೆ ವಯೋಮಿತಿಯಲ್ಲಿ 10 ವರ್ಷಗಳ ಸಡಿಲಿಕೆ ಇರುತ್ತದೆ.
2. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿ, ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳು ಆಗುವುದೋ ಅಷ್ಟು ವರ್ಷಗಳ ಸಡಿಲಿಕೆ.
3. ವಿಧವೆಯಾಗಿದ್ದರೆ ಅವರು ಗರಿಷ್ಠ ವಯೋಮಿತಿ ಸೌಲಭ್ಯವನ್ನು ಕೋರುವವರು ವಿಧವೆಯೆಂಬ ಬಗ್ಗೆ ತಹಶೀಲ್ದಾರ್ ದರ್ಜೆಗೆ ಕಡಿಮೆ ಇಲ್ಲದ ಕಂದಾಯ ಪ್ರಾಧಿಕಾರದಿಂದ ಪ್ರಡೆದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.

**ಆಯ್ಕೆ ವಿಧಾನಃ**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) ನಿಯಮ, 1982 ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ ನೇಮಕಾತಿ) (ತಿದ್ದುಪಡಿ) ನಿಯಮ, 2007 ಹಾಗೂ 2021.

ಶೀಘ್ರಲಿಪಿಗಾರರು ಗ್ರೇಡ್-III, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರ ಹುದ್ದೆಗಳ ಅಭ್ಯರ್ಥಿಗಳಿಗೆ ಈ ಕೆಳಕಂಡಂತೆ ಅರ್ಹತಾ ಪರೀಕ್ಷೆಯನ್ನು ಏರ್ಪಡಿಸಲಾಗುವುದು.

**ಶೀಘ್ರಲಿಪಿಗಾರರು ಗ್ರೇಡ್- III ಅರ್ಹತಾ ಪರೀಕ್ಷೆ :**

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 05 ನಿಮಿಷಗಳಲ್ಲಿ ನೀಡುವ ಉಕ್ತಲೇಖನವನ್ನು ಸುಮಾರು 45 ನಿಮಿಷದ ಕಾಲಾವಕಾಶದಲ್ಲಿ ಬೆರಳಚ್ಚು ಯಂತ್ರದಲ್ಲಿ ಲಿಪ್ಯಂತರಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

**ಬೆರಳಚ್ಚುಗಾರರ ಹುದ್ದೆಗಳಿಗೆ**

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ನೀಡುವ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

**ಬೆರಳಚ್ಚು-ನಕಲುಗಾರರ ಹುದ್ದೆಗಳಿಗೆ**

1. ಅಭ್ಯರ್ಥಿಯು ನೇಮಕಾತಿ ಪ್ರಾಧಿಕಾರದಿಂದ ನಾಮ ನಿರ್ದೇಶಿಸಲ್ಪಟ್ಟ ಅಧಿಕಾರಿಯವರಿಂದ 15 ನಿಮಿಷಗಳ ಕಾಲ ನೀಡುವ ಉಕ್ತಲೇಖನಕ್ಕೆ ಬೆರಳಚ್ಚು ಯಂತ್ರದಲ್ಲಿ ಬೆರಳಚ್ಚುಪಡಿಸತಕ್ಕದ್ದು,
2. ಈ ಪರೀಕ್ಷೆಯು ಗರಿಷ್ಟ 100 ಅಂಕಗಳದ್ದಾಗಿದ್ದು ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು.

ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು, ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಆದೇಶ-ಜಾರಿಕಾರರ ಹುದ್ದೆಗಳಿಗೆ :**

ಆದೇಶ-ಜಾರಿಕಾರರ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಅನ್ವಯ 01 ಹುದ್ದೆಗೆ 25ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನದ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಜವಾನರ ಹುದ್ದೆಗಳಿಗೆಃ**

**ಜವಾನರ ಹುದ್ದೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಅನ್ವಯ 01 ಹುದ್ದೆಗೆ 10ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನದ ಪ್ರಕ್ರಿಯೆಗೆ ತೊಡಗಿಸಲಾಗುವುದು ಹಾಗೂ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.**

## ಪರಿವೀಕ್ಷಣಾ ಅವಧಿಃ

ನೇಮಕ ಹೊಂದಿದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ, ಪರಿವೀಕ್ಷಣಾ ನಿಯಮ 1977ರ ಪ್ರಕಾರ 02 ವರ್ಷಗಳ ಪರಿವೀಕ್ಷಣಾ ಅವಧಿಯಲ್ಲಿರತಕ್ಕದ್ದು, ಹಾಗೂ ಸದರಿ ಅವಧಿಯಲ್ಲಿ ತಮ್ಮ ಹುದ್ದೆಗಳಿಗೆ ಯಾವುದಾದರೂ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ನಿಯಮದಡಿ ಗೊತ್ತುಪಡಿಸಿದರೆ ಅವುಗಳಲ್ಲಿ ಉತ್ತೀರ್ಣರಾಗತಕ್ಕದ್ದು.

## ಪಿಂಚಣಿ ಸೌಲಭ್ಯ:

ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ. (ಎಸ್.ಪಿ.ಎಲ್)/04/ಪಿ.ಇ.ಟಿ/ದ5, ದಿನಾಂಕ:31.03.2006 ರಂತೆ ಅನ್ವಯಿಸುವುದು.

## ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 43 ಸೇವನೆ 2008, ದಿ: 07.03.2012 ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದ ಆದೇಶಗಳನ್ವಯ ಆಯ್ಕೆಯಾದ ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು ಕರ್ನಾಟಕ ಸರ್ಕಾರ ನಿಗದಿಪಡಿಸುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಶೇ.50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು, ಪರಿವೀಕ್ಷಣಾ ಅವಧಿಯೊಳಗೆ ಪಾಸು ಮಾಡತಕ್ಕದ್ದು.

## ವೇತನ ಶ್ರೇಣಿ :

| | |
|---|---|
| ಶೀಘ್ರಲಿಪಿಗಾರರು | ರೂ. 27650-650-29600-750-32600-850-36000-950-39800-1100-46400-1250-52650 ಮತ್ತು ಇತರೆ ಭತ್ಯೆಗಳು |
| ಬೆರಳ ಚ್ಚುಗಾರರು | ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು |
| ಬೆರಳ ಚ್ಚು-ನಕಲುಗಾರರು | ರೂ.21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು |
| ಆದೇಶ-ಜಾರಿಕಾರರು | ರೂ.19950-450-20400-500-22400-550-24600-600-27000-650-29600-750-32600-850-36000-950-37900 ಮತ್ತು ಇತರೆ ಭತ್ಯೆಗಳು |
| ಜವಾನರು | ರೂ.17000-400-18600-450-20400-500-22400-550-24600-600-27000-650-28950 ಮತ್ತು ಇತರೆ ಭತ್ಯೆಗಳು |

## ಅರ್ಜಿ ಹಾಗೂ ನಿಗದಿತ ಅರ್ಜಿ ಶುಲ್ಕ - ಪಾವತಿಸಬೇಕಾದ ವಿಧಾನ :-

### ಅರ್ಜಿ ಶುಲ್ಕ :

| | |
|---|---|
| ಸಾಮಾನ್ಯ ವರ್ಗ | ರೂ.300/- |
| 2ಎ, 2ಬಿ, 3ಎ, 3ಬಿ | ರೂ.150/- |
| ಪ.ಜಾ, ಪ್ರವರ್ಗ-1, ಅಂಗವಿಕಲ ಅಭ್ಯರ್ಥಿಗಳು | ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ |

ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಎಲ್ಲಾ ವಿವರಗಳನ್ನು ಭರ್ತಿಮಾಡಿದ ನಂತರ, ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/chitradurga-onlinerecruitment**

ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ Online payment through net banking/credit card/debit card/challan download ಸೌಲಭ್ಯದ ಮೂಲಕ ಪಾವತಿಸಬೇಕು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ print out ಅನ್ನು ಪಡೆದುಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ Demand Draft, Postal Order, Money Order ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಒಂದು ವೇಳೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ/ಹೊಂದಿಕೆಯಾಗದಂತೆ ನಮೂದಿಸಿದ್ದಲ್ಲಿ ಅಥವಾ ಯಾವುದೇ ಕಾರಣಕ್ಕಾಗಿ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ.

**ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1. ಅಭ್ಯರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಒಂದೇ ಹುದ್ದೆಯ ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದರಿ ಅರ್ಜಿಯಲ್ಲಿಯೇ ತಾವು ಕ್ಲೈಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.
3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
4. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಾಗಿ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
5. ಅಭ್ಯರ್ಥಿಗಳು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು, ಅಳತೆಯಲ್ಲಿ 5 cm ಉದ್ದ X 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಬಿಳಿ ಬಣ್ಣದ ಪರದೆಯ ಹಿನ್ನಲೆ ಇರುವ ಭಾವಚಿತ್ರವಾಗಿರಬೇಕು. (white background screen).

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ

ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (2.5 cm ಉದ್ದ X 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು).

6. ತದನಂತರ ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮುಖ್ಯ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸಕತಕ್ಕದ್ದು.
7. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ ಹಾಗೂ ಯಾವುದೇ ಇತರೆ ನೇಮಕಾತಿಗೆ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.
8. ಈ ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು ದಿ: 18.08.2022 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ ಮತ್ತು ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿ: 20.08.2022 ಕಡೆಯ ದಿನಾಂಕವಾಗಿದ್ದು, ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.
9. ಅರ್ಹತಾ ಪರೀಕ್ಷೆಯ ವೇಳಾಪಟ್ಟಿ ಹಾಗೂ ಸಂದರ್ಶನದ ವೇಳಾಪಟ್ಟಿಯನ್ನು ಈ ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/chitradurga-onlinerecruitment** ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೈಬ್‌ಸೆಟ್‌ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ, ಅಭ್ಯರ್ಥಿಗಳು ಈ ಕಛೇರಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ ದಿನಾಂಕ ಹಾಗೂ ಸಮಯದಂದು ಕಡ್ಡಾಯವಾಗಿ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಓಟರ್ ಐಡಿ, ಆಧಾರ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್, ಪಾನ್ ಕಾರ್ಡ್) ಹಾಜರಾಗತಕ್ಕದ್ದು. ಅಭ್ಯರ್ಥಿಗಳು ಇ-ಮೇಲ್ ಐಡಿ ನಮೂದಿಸಿದ್ದ ಪಕ್ಷದಲ್ಲಿ ಅರ್ಹತಾ ಪರೀಕ್ಷೆ/ಸಂದರ್ಶನಕ್ಕೆ ಮಾಹಿತಿ ನೀಡಲಾಗುವುದು.
10. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಇತರೆ ಸೂಚನೆಗಳು:

1. ಅಭ್ಯರ್ಥಿಗಳು ಅರ್ಹತಾ ಪರೀಕ್ಷೆ/ಸಂದರ್ಶನ/ದಾಖಲಾತಿ ಪರಿಶೀಲನೆ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.

ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.

ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಿಶೀದಿ ಪ್ರತಿ.

ಇ) ಮೂಲ ದ್ವಿತೀಯ ಪಿ.ಯು.ಸಿ./ಎಸ್.ಎಸ್.ಎಲ್.ಸಿ. ಅಂಕಪಟ್ಟಿ.

ಈ) ಹುದ್ದೆಗಳಿಗನುಗುಣವಾಗಿ ಕನ್ನಡ ಮತ್ತು ಇಂಗ್ಲೀಷ್ ಪ್ರೌಢದರ್ಜೆ/ಪ್ರಥಮ ದರ್ಜೆ ಶೀಘ್ರಲಿಪಿ/ಬೆರಳಚ್ಚು ಪರೀಕ್ಷೆಗಳ ಮೂಲ ಅಂಕಪಟ್ಟಿಗಳು.

2. ಪರಿಶಿಷ್ಟ ಜಾತಿ ಅಭ್ಯರ್ಥಿಗಳು ನಮೂನೆ-ಡಿ ರಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನಿನಿ/2005, ದಿನಾಂಕ:10.08.2005ರ ಪ್ರಕಾರ ನಿಗಧಿತ ನಮೂನೆ 2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಮೀಸಲಾತಿ ಪ್ರಮಾಣ ಪತ್ರದ ಜೊತೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ತಹಶೀಲ್ದಾರ್‌ರವರಿಂದ ಪ್ರಮಾಣ ಪತ್ರವನ್ನು ಸಹ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.
4. ಅಂಗವಿಕಲ ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ:19.05.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ:115/ಸೇನ ನಿ/2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.
5. ಮಾಜಿ ಸೈನಿಕರ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ ಬಗ್ಗೆ ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.
6. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/44/ಸೇನನಿ/2001, ದಿ: 27.07.2001 ಹಾಗೂ ಸಂಬಂಧಪಟ್ಟ ಇತರೆ ಸರ್ಕಾರಿ ಆದೇಶದನ್ವಯ ನಿಗದಿಪಡಿಸಿರುವ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.
7. ತೃತೀಯ ಲಿಂಗ ಮೀಸಲಾತಿಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು Section 6 of the Transgender Persons (Protection of Rights) Act, 2019 ರ ಪ್ರಕಾರ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ಹಾಜರುಪಡಿಸತಕ್ಕದ್ದು.
8. ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ಮಾಹಿತಿಯನ್ವಯ ಆಯ್ಕೆಯಾದಲ್ಲಿ ಸಕ್ಷಮ ಪ್ರಾಧಿಕಾರಿದಿಂದ "ನಿರಾಕ್ಷೇಪಣಾ ಪ್ರಮಾಣ ಪತ್ರ" ವನ್ನು ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗೆ ಪಡೆದುಕೊಂಡು ಈ ನೇಮಕಾತಿ ಪ್ರಾಧಿಕಾರ ಸೂಚಿಸಿದಾಗ ಸಲ್ಲಿಸುವುದು.
9. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗಿನ ಇಬ್ಬರು ಗಣ್ಯವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ ಪಡೆದಿರಬೇಕು (ಗಣ್ಯ ವ್ಯಕ್ತಿಗಳ ಸಹಿ ಮತ್ತು ಮೊಹರು ಕಡ್ಡಾಯವಾಗಿರಬೇಕು) ಹಾಗೂ ಶಾಲಾ ನಡತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆದಿರಬೇಕು. ಈ

ಮೂರು ಪ್ರಮಾಣ ಪತ್ರಗಳನ್ನು ದಾಖಲಾತಿ ಪರಿಶೀಲನೆ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

10. ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ದಾಖಲೆಗಳ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

11. ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

12. ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು, ಖೋಟಾ ದಸ್ತಾವೇಜು, ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು, ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು, ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು, ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ನೇಮಕಾತಿ ಸಂದರ್ಭದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

12/7/2022

(ಮನಗೂಳಿ ಪ್ರೇಮಾವತಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ.

ಪ್ರತಿಯನ್ನು:

ಮಾನ್ಯ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು, ಇವರಿಗೆ(ಪತ್ರದೊಂದಿಗೆ) ಸಲ್ಲಿಸಲಾಗಿದೆ.

**ಅಧಿಸೂಚನೆಯ ಪ್ರತಿಯನ್ನು ತಮ್ಮ ಕಛೇರಿ ಗೆ ರವಾನಿಸುತ್ತಾ ವಿನಂತಿಸುವುದೇನೆಂದರೆ, ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಲಗತ್ತಿಸಲು ಕೋರಲಾಗಿದೆ:-**

(1) ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳಿಗೆ, ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ --------------------------------
(2) ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
(3) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿತ್ರದುರ್ಗ.
(4) ಈ ಜಿಲ್ಲೆಯ ಎಲ್ಲಾ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು
(5) ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ ಪ್ರಕಟಿಸಲು.
(6) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ
(7) ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
(8) ಜಿಲ್ಲಾಧಿಕಾರಿಗಳು, ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
(9) ಆಯುಕ್ತರು, ನಗರಸಭಾ ಕಾರ್ಯಾಲಯ, ನಗರಸಭೆ, ಚಿತ್ರದುರ್ಗ
(10) ತಹಶೀಲ್ದಾರರು, ತಹಶೀಲ್ದಾರ್‌ರವರ ಕಛೇರಿ ಚಿತ್ರದುರ್ಗ.
(11) ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.